## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಬೆಂಗಳೂರಿನ ಶ್ರೀ ರಂಗನಾಥ ಎಜುಕೇಷನಲ್ ಟ್ರಸ್ಟಿನ ಚಿಕ್ಕಮಗಳೂರಿನ ಶ್ರೀ ರಂಗನಾಥ ಕಾಲೇಜ್ ಆಫ್ ಪ್ಯಾರಾ ಮೆಡಿಕಲ್ ಸೈನ್ಸಸ್‌ಗೆ ಮಂಜೂರಾತಿ.

**ಓದಲಾಗಿದೆ:** ದಿನಾಂಕ 02-08-2006 ಸಂಖ್ಯೆ: ಪಿಎಂಬಿ/66/05-06ರ ಪ್ಯಾರಾ ಮೆಡಿಕಲ್ ಬೋರ್ಡ್‌ನ ಸದಸ್ಯ ಕಾರ್ಯದರ್ಶಿಯವರ ಪತ್ರ.

ಪ್ರಸ್ತಾವನೆ:

1) ಬೆಂಗಳೂರಿನ ಶ್ರೀ ರಂಗನಾಥ ಎಜುಕೇಷನಲ್ ಟ್ರಸ್ಟಿನವರು ಚಿಕ್ಕಮಗಳೂರಿನ ಪ್ಯಾರಾ ಮೆಡಿಕಲ್ ಕಾಲೇಜಿಗೆ ಡಿಪ್ಲೊಮ ಇನ್ ಮೆಡಿಕಲ್ ಲ್ಯಾಬ್ ಟೆಕ್ನಾಲಜಿ, ಡಿಪ್ಲೊಮ ಇನ್ ಮೆಡಿಕಲ್ ಎಕ್ಸ್‌ರೇ ಟೆಕ್ನಾಲಜಿ, ಡಿಪ್ಲೊಮ ಇನ್ ಹೆಲ್ತ್ ಇನ್ಸ್‌ಪೆಕ್ಟರ್ ಮತ್ತು ಡಿಪ್ಲೊಮ ಇನ್ ಆಪರೇಷನ್ ಥಿಯೇಟರ್ ಟೆಕ್ನಾಲಜಿ ಕೋರ್ಸುಗಳ ಮಂಜೂರಾತಿಗಾಗಿ ಅರ್ಜಿಯನ್ನು ಪ್ಯಾರಾ ಮೆಡಿಕಲ್ ಮಂಡಳಿಗೆ ಸಲ್ಲಿಸಿತ್ತು. ಮಂಡಳಿಯು ವಿಷಯ ತಜ್ಞರ ತಂಡವನ್ನು ರಚಿಸಿ ಮೇಲ್ಕಂಡ ಕೋರ್ಸನ್ನು ಸಂಸ್ಥೆಯು ನಡೆಸಲು ಹೊಂದಿರುವ ಮೂಲಭೂತ ಸೌಕರ್ಯಗಳನ್ನು ಪರವೀಕ್ಷಿಸಿ ಅದರ ವರದಿಯನ್ನು ಸಲ್ಲಿಸಲು ಸೂಚಿಸಿತ್ತು. ತಜ್ಞರ ತಂಡವು ಸಂಸ್ಥೆಯನ್ನು ದಿನಾಂಕ 05-05-2006 ಮತ್ತು 30-05-2006ರಂದು ಭೇಟಿ ನೀಡಿ ಪರಿವೀಕ್ಷಿಸಿ ಅದರ ವರದಿಯನ್ನು ಸೂಕ್ತ ಶಿಫಾರಸ್ಸಿನೊಂದಿಗೆ ಮಂಡಳಿಗೆ ಸಲ್ಲಿಸಿತ್ತು. ತಜ್ಞರ ತಂಡದ ಪರಿವೀಕ್ಷಣಾ ವರದಿಯನ್ನು ದಿನಾಂಕ 24-07-2006ರಂದು ನಡೆದ ಮಂಡಳಿಯ ಸಭೆಯಲ್ಲಿ ವಿಶ್ಲೇಷಿಸಿ ಮೇಲ್ಕಂಡ ಕೋರ್ಸುಗಳನ್ನು ಮಂಜೂರು ಮಾಡಲು ಸರ್ಕಾರಕ್ಕೆ ಶಿಫಾರಸ್ಸು ಮಾಡಿ ಸರ್ಕಾರದ ಆದೇಶವನ್ನು ಹೊರಡಿಸುವಂತೆ ಮೇಲೆ ಓದಲಾದ ಪತ್ರದನ್ವಯ ಪ್ಯಾರಾ ಮಡಿಕಲ್ ಬೋರ್ಡಿನ ಸದಸ್ಯ ಕಾರ್ಯದರ್ಶಿರವರು ಕೋರಿರುತ್ತಾರೆ.

2) ಪ್ರಕರಣವನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಆಕುಕ 79 ಎಂಎಂಇ 2006, ಬೆಂಗಳೂರು, ದಿನಾಂಕ 19-09-2006**

3) ಬೆಂಗಳೂರಿನ ಶ್ರೀ ರಂಗನಾಥ ಎಜುಕೇಷನಲ್ ಟ್ರಸ್ಟಿನ ಚಿಕ್ಕಮಗಳೂರಿನ ಶ್ರೀ ರಂಗನಾಥ ಕಾಲೇಜ್ ಆಫ್ ಪ್ಯಾರಾ ಮೆಡಿಕಲ್ ಸೈನ್ಸಸ್‌ಗೆ ತಲಾ 20 (ಇಪ್ಪತ್ತು) ವಿದ್ಯಾರ್ಥಿಗಳ ಪ್ರವೇಶ ಮಿತಿಯ (1) **ಡಿಪ್ಲೊಮ ಇನ್ ಮೆಡಿಕಲ್ ಲ್ಯಾಬ್ ಟೆಕ್ನಾಲಜಿ**, (2) **ಡಿಪ್ಲೊಮ ಇನ್ ಮೆಡಿಕಲ್ ಎಕ್ಸ್‌ರೇ** ಟೆಕ್ನಾಲಜಿ, (3) **ಡಿಪ್ಲೊಮ ಇನ್ ಹೆಲ್ತ್ ಇನ್ಸ್‌ಪೆಕ್ಟರ್**, ಮತ್ತು (4) **ಡಿಪ್ಲೊಮ ಇನ್ ಆಪರೇಷನ್ ಥಿಯೇಟರ್** ಟೆಕ್ನಾಲಜಿ ಕೋರ್ಸುಗಳನ್ನು ಪ್ರಾರಂಭಿಸಲು ಮಂಜೂರಾತಿ ನೀಡಿದೆ. ಸದರಿ ಮಂಜೂರಾತಿಯು ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟಿರುತ್ತದೆ.

### ಷರತ್ತುಗಳು

(1) ಯಾವುದೇ ಪ್ಯಾರಾ 'ಮೆಡಿಕಲ್ ಕೋರ್ಸುಗಳನ್ನು ಪ್ರಾರಂಭ ಮಾಡುವ ಮೊದಲು ಸಂಸ್ಥೆಯು ಸಂಯೋಜನಾ ಶುಲ್ಕದ ರೂಪದಲ್ಲಿ ಪ್ರತಿ ಕೋರ್ಸಿಗೆ ರೂ.30,000/- (ಮೂವತ್ತು ಸಾವಿರ ರೂಪಾಯಿಗಳು ಮಾತ್ರ) ಹಾಗೂ ಪ್ರತಿ ವರ್ಷ ಸಂಯೋಜನಾ ನವೀಕರಣ ಶುಲ್ಕವಾಗಿ ರೂ.10,000/- (ಹತ್ತು ಸಾವಿರ ರೂಪಾಯಿಗಳು ಮಾತ್ರ) ಅನ್ನು ಪ್ಯಾರಾ ಮೆಡಿಕಲ್ ಬೋರ್ಡಿಗೆ ಸಂದಾಯ ಮಾಡತಕ್ಕದ್ದು.

(2) ಸಂಸ್ಥೆಯವರು ಕೋರ್ಸನ್ನು ಪ್ರಾರಂಭಿಸುವ ಮೊದಲು ಬೋರ್ಡ್ ನಿಗಧಿಪಡಿಸುವ ಬ್ಯಾಂಕ್ ಗ್ಯಾರಂಟಿಯನ್ನು ಒದಗಿಸತಕ್ಕದ್ದು.

(3) ಸದರಿ ಕೋರ್ಸುಗಳಿಗೆ ವಿದ್ಯಾರ್ಥಿ ಪ್ರವೇಶವನ್ನು ವರ್ಷಕ್ಕೆ ಒಂದು ಬಾರಿ ನವೆಂಬರ್ ತಿಂಗಳೊಳಗೆ ತೆಗೆದುಕೊಂಡು ಜನವರಿ ಅಥವಾ ಫೆಬ್ರವರಿ ತಿಂಗಳ ಮದ್ಯಾಂತರದೊಳಗೆ ವಿದ್ಯಾರ್ಥಿಗಳ ಪಟ್ಟಿಯನ್ನು ಮೂಲ ಅಂಕಪಟ್ಟಿ ಮತ್ತು ದೃಢೀಕರಣಗಳನ್ನು ಬೋರ್ಡಿಗೆ ಸಲ್ಲಿಸತಕ್ಕದ್ದು.

(4) ,ಸದರಿ ಕೋರ್ಸುಗಳಿಗೆ ಪ್ರವೇಶ ಪಡೆದ ಪ್ರತಿ ವಿದ್ಯಾರ್ಥಿಗೆ ರೂ.500.00 ರಂತೆ ನೊಂದಣಿ ಶುಲ್ಕದೊಂದಿಗೆ ವಿದ್ಯಾರ್ಥಿಗಳ ಆಯ್ಕೆ ಪಟ್ಟಿಯನ್ನು ಅವರ ವಿದ್ಯಾರ್ಹತೆಯ ಪ್ರಮಾಣ ಪತ್ರದೊಂದಿಗೆ ಮಂಜೂರಾತಿಗಾಗಿ ಪ್ಯಾರಾ ಮೆಡಿಕಲ್ ಬೋರ್ಡಿಗೆ ಸಲ್ಲಿಸತಕ್ಕದ್ದು.

(5) ಪ್ಯಾರಾ ಮೆಡಿಕಲ್ ಕೋರ್ಸಿಗೆ ಪ್ರವೇಶ ಪಡೆಯಲು ಕನಿಷ್ಠ ವಿದ್ಯಾರ್ಹತೆಯು ಪಿ.ಯು.ಸಿ. ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಹೊಂದಿರಬೇಕು.

(6) ಪ್ಯಾರಾ ಮೆಡಿಕಲ್ ಕೋರ್ಸಿಗೆ ಪ್ರವೇಶ ಪಡೆದ ಪ್ರತಿ ವಿದ್ಯಾರ್ಥಿಯಿಂದ ಸರ್ಕಾರ ನಿಗದಿಪಡಿಸಿದ ಶುಲ್ಕವನ್ನು ಮಾತ್ರ ಪಡೆಯತಕ್ಕದ್ದು.

(7) ಸರ್ಕಾರ ಮಂಜೂರಾತಿ ನೀಡಿದ ಪ್ರವೇಶ ಮಿತಿಗಿಂತ ಹೆಚ್ಚಿನ ವಿದ್ಯಾರ್ಥಿಗಳಿಗೆ ಪ್ರವೇಶ ನೀಡತಕ್ಕದ್ದಲ್ಲ. ಒಂದು ವೇಳೆ ನಿಗದಿಪಡಿಸಿದ ಪ್ರವೇಶ ಮಿತಿಗಿಂತ ಹೆಚ್ಚಿನ ಪ್ರವೇಶ ಮಾಡಿಕೊಂಡಲ್ಲಿ ಅದರಿಂದ ಉಂಟಾಗುವ ಅನಾನುಕೂಲ ಸಮಸ್ಯೆಗಳಿಗೆ ಸಂಸ್ಥೆಯೇ ಜವಾಬ್ದಾರಿಯಾಗಿರುತ್ತದೆ.

(8) ಸಂಸ್ಥೆಯವರಿಗೆ ನಿಗಧಿಪಡಿಸಿದ ಸೀಟುಗಳಲ್ಲಿ ಶೇ.20ರಷ್ಟನ್ನು ಸರ್ಕಾರದಿಂದ ಆಯ್ಕೆ ಮಾಡಿದ ಅಭ್ಯರ್ಥಿಗಳಿಗೆ ಪ್ರವೇಶ ನೀಡಲು ಸಂಸ್ಥೆಯು ಬದ್ಧವಾಗಿರತಕ್ಕದ್ದು.

(9) ಪ್ಯಾರಾ ಮೆಡಿಕಲ್ ಬೋರ್ಡ್ ನಿಗದಿಪಡಿಸಿದ ನಿಯಮಾವಳಿಯಂತೆ, ಪ್ಯಾರಾ ಮೆಡಿಕಲ್ ಕೋರ್ಸಿಗೆ ಪ್ರವೇಶ ಪಡೆಯುವ ಪ್ರತಿ ವಿದ್ಯಾರ್ಥಿಯು ವಯೋಮಿತಿ, ಪಠ್ಯಕ್ರಮ, ಕೋರ್ಸಿನ ಅವಧಿ ಹಾಗೂ ಪರೀಕ್ಷಾ ಕ್ರಮ ಮತ್ತು ಪ್ಯಾರಾ ಮೆಡಿಕಲ್ ಬೋರ್ಡ್ ನಿಗದಿಪಡಿಸಿದ ಇತರೆ ನಿಯಮಗಳನ್ನು ಸಂಸ್ಥೆಯು ಚಾಚೂ ತಪ್ಪದೇ ಕಡ್ಡಾಯವಾಗಿ ಪಾಲಿಸತಕ್ಕದ್ದು.

(10) ಸಂಸ್ಥೆಯು ಸುಸಜ್ಜಿತ ತರಗತಿ ಕೊಠಡಿ, ಪ್ರಯೋಗಶಾಲೆ, ವಾಚನಾಲಯ, ವಿದ್ಯಾರ್ಥಿನಿಲಯ ಹಾಗೂ ಇತರೆ ಸೌಲಭ್ಯವನ್ನು ವಿದ್ಯಾರ್ಥಿಗಳಿಗೆ ಒದಗಿಸತಕ್ಕದ್ದು.

(11) ಸದರಿ ಸಂಸ್ಥೆಯು ಹೊಂದಿರುವ ಮೂಲಭೂತ ಸೌಕರ್ಯಗಳ ಬಗ್ಗೆ ವಿದ್ಯಾರ್ಥಿಗಳು ಮೊದಲ ವರ್ಷದ ಪರೀಕ್ಷೆಯನ್ನು ತೆಗೆದುಕೊಳ್ಳುವ ಪೂರ್ವದಲ್ಲಿ ಪ್ಯಾರಾ ಮೆಡಿಕಲ್ ಬೋರ್ಡ್ ಇಚ್ಛಿಸಿದಲ್ಲಿ ಎರಡನೇ ಬಾರಿಗೆ ಸಂಸ್ಥೆಯನ್ನು ತಪಾಸಣೆ ಮಾಡಬಹುದು.

(12) ಸರ್ಕಾರದಿಂದ ಯಾವುದೇ ಆರ್ಥಿಕ ಸೌಲಭ್ಯ ಅಥವಾ ಅನುದಾನವನ್ನು ಸಂಸ್ಥೆಗೆ ನೀಡಲಾಗುವುದಿಲ್ಲ.

(13) ಸಂಸ್ಥೆಯನ್ನು ಪ್ಯಾರಾ ಮೆಡಿಕಲ್ ಬೋರ್ಡ್‌ನಲ್ಲಿ ನೋಂದಣಿ ಮಾಡಿಸತಕ್ಕದ್ದು ಹಾಗೂ ಪ್ಯಾರಾ ಮೆಡಿಕಲ್ ಬೋರ್ಡ್ ನಿಗದಿಪಡಿಸುವ ಮಾದರಿಯನ್ನು ಅನುಸರಿಸತಕ್ಕದ್ದು.

(14) ಪ್ಯಾರಾ ಮೆಡಿಕಲ್ ಕೋರ್ಸಿನ ಅಂತ್ಯದಲ್ಲಿ ಪ್ಯಾರಾ ಮೆಡಿಕಲ್ ಬೋರ್ಡ್ ನಡೆಸುವ ಪರೀಕ್ಷೆಯನ್ನು ವಿದ್ಯಾರ್ಥಿಗಳು ತೆಗೆದುಕೊಂಡು, ಉತ್ತೀರ್ಣರಾಗುವ ವಿದ್ಯಾರ್ಥಿಗಳಿಗೆ ಪ್ರಮಾಣಪತ್ರವನ್ನು ಪ್ಯಾರಾ ಮೆಡಿಕಲ್ ಬೋರ್ಡಿನಿಂದ ಪಡೆಯತಕ್ಕದ್ದು.

(15) ಪ್ರತಿ ತಪಾಸಣೆಗೆ ಮತ್ತು ಒಂದು ಕೋರ್ಸಿಗೆ ಸಂಸ್ಥೆಯು ರೂ.10,000/- (ಹತ್ತು ಸಾವಿರ ರೂಪಾಯಿಗಳು ಮಾತ್ರ) ಅನ್ನು ತಪಾಸಣಾ ಶುಲ್ಕವಾಗಿ ಪ್ಯಾರಾ ಮೆಡಿಕಲ್ ಬೋರ್ಡಿಗೆ ಪಾವತಿ ಮಾಡತಕ್ಕದ್ದು.

(16) ದಿನಾಂಕ 30-03-1999 ಸಂಖ್ಯೆ: ಆಕುಕ 144 ಎಂಎಂಇ 98ರ ಸರ್ಕಾರಿ ಆದೇಶದಲ್ಲಿ ನಿರ್ದಿಷ್ಟಪಡಿಸಿರುವ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

(17) ಸಂಸ್ಥೆಯು ಪ್ರತೀ ವರ್ಷ ,ವಿದ್ಯಾರ್ಥಿಗಳ ವಾರ್ಷಿಕ ಪ್ರವೇಶವನ್ನು ಮಾಡುವ ಮೊದಲು ಸಂಸ್ಥೆಯು ಪ್ರಾಂಶುಪಾಲರನ್ನು ಒಳಗೊಂಡಂತೆ ಎಲ್ಲಾ ಸಿಬ್ಬಂದಿಗಳ (ಬೋಧಕ ಮತ್ತು ಬೋಧಕೇತರ) ಸಂಪೂರ್ಣ ಮಾಹಿತಿಯನ್ನು ನೀಡತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,
(ಡಿ.ಬಿ.ಗಣಾಚಾರಿ) 19/...
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
(ವೈದ್ಯಕೀಯ ಶಿಕ್ಷಣ)

ಇವರಿಗೆ:

1) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಆಯುಕ್ತರು/ನಿರ್ದೇಶಕರು, ಆನಂದರಾವ್ ವೃತ್ತ, ಬೆಂಗಳೂರು-560009.